ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು–560 027. ಭಾರತ
ದೂರವಾಣಿ : 080-22221321 / 22221325
ವೆಬ್–ಸೈಟ್ : www.ksrtc.in

**Karnataka State Road Transport Corporation**
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಕರಾಸ:ಕೇಕ:ಆಡಳತ:ಸೇನಿ:518:44:16–17 ದಿನಾಂಕ:16–05–2016

## ಸುತ್ತೋಲೆ ಸಂಖ್ಯೆ: 1588

ವಿಷಯ: ವಿಧಾನ ಸಭೆ/ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರು ಆಡಳತಾತ್ಮಕ ವಿಷಯದಲ್ಲಿ ಸಭೆ ನಡೆಸಲು ಅಧಿಕಾರ ಹೊಂದಿರುವ ಬಗ್ಗೆ.

ಉಲ್ಲೇಖ: 1) ಸಂ: ಸಿಆಸುಇ 272 ಸೇಅಸೆ 2009 ದಿನಾಂಕ 25-6-2009
2) ಸಂ: ಸಿಆಸುಇ 9 ರಾರಾಆ 2016 ದಿನಾಂಕ: 27-04-2016

\- - - -

ಉಲ್ಲೇಖ-1ರಲ್ಲಿ ಕರ್ನಾಟಕ ಸರ್ಕಾರವು ವಿಧಾನ ಸಭೆ/ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಿಗೆ ಆಡಳತಾತ್ಮಕ ವಿಷಯಗಳಲ್ಲಿ ಇರುವ ಅಧಿಕಾರದ ಬಗ್ಗೆ ವಿವರಿಸಿ "ವಿರೋಧ ಪಕ್ಷದ ನಾಯಕರಿಗೆ ಸಂಪುಟ ದರ್ಜೆಯ ಸಚಿವರ ವೇತನ, ಭತ್ಯೆ, ಮತ್ತಿತರ ಸೌಲಭ್ಯಗಳನ್ನು ನೀಡಲಾಗಿದೆಯೇ ಹೊರತು ಅವರು ಸರ್ಕಾರದ ಭಾಗವಾಗಿಲ್ಲದಿರುವುದರಿಂದ ಅವರಿಗೆ ಸಚಿವರಿಗಿರುವ ಆಡಳತಾತ್ಮಕ ಅಧಿಕಾರವನ್ನು ನೀಡಲಾಗಿಲ್ಲ. ಆದ್ದರಿಂದ, ಸದರಿಯವರು ಸಚಿವ ಸಂಪುಟ ಸಚಿವರಿಗೆ ನೀಡತಕ್ಕ ಶಿಷ್ಟಾಚಾರಕ್ಕೆ ಅರ್ಹರಾಗಿರುತ್ತಾರೆ ಮತ್ತು ಸರ್ಕಾರಕ್ಕೆ ಸಂಬಂಧಪಟ್ಟಂತೆ ಬೇಕಾದ ಅಗತ್ಯ ಮಾಹಿತಿಯನ್ನು ಅವರು ಸದನದ ಮೂಲಕವಾಗಲಿ, ಸಭಾಧ್ಯಕ್ಷ/ಸಭಾಪತಿಗಳ/ಸಚಿವರ ಮೂಲಕವಾಗಲಿ ಅಥವಾ ಪತ್ರದ ಮೂಲಕ ಬರೆದು ಪಡೆಯಬಹುದಾಗಿದೆ. ವಿಧಾನ ಸಭೆ ಅಥವಾ ವಿಧಾನ ಪರಿಷತ್ತಿನ ಸದಸ್ಯರಿಗೆ ಸರ್ಕಾರದಿಂದ ಅಗತ್ಯ ಮಾಹಿತಿ ಪಡೆಯಲು ಯಾವ ಅಧಿಕಾರ ಇದೆಯೋ ಆ ಅಧಿಕಾರ ವಿರೋಧ ಪಕ್ಷದ ನಾಯಕರಿಗೆ ಇದೆ.

ಆದರೆ, ಅಧಿಕಾರಿಗಳ ಸಭೆ ಕರೆಯಲು ಸಚಿವರಿಗೆ ಇರುವ ಅಧಿಕಾರ ವಿರೋಧ ಪಕ್ಷದ ನಾಯಕರಿಗೆ ಇರುವುದಿಲ್ಲ. ಇದು ಯಾವುದೇ ರೀತಿಯಲ್ಲಿ ವಿರೋಧ ಪಕ್ಷದ ನಾಯಕರ ಘನತೆಗೆ ಕುಂದುತರುವ ಅಥವಾ ಅಗೌರವ ಸೂಚಕವೆಂದು ಪರಿಗಣಿಸಲಾಗದು. ಈ ಅಂಶವನ್ನು ಜಿಲ್ಲಾಧಿಕಾರಿಗಳು ಸೇರಿದಂತೆ ಇತರೆ ಸರ್ಕಾರಿ ಅಧಿಕಾರಿಗಳು ಗಮನದಲ್ಲಿಡಬೇಕು".

ಮೇಲೆ ತಿಳಿಸಿದ ಹಿನ್ನೆಲೆಯಲ್ಲಿ ವಿರೋಧ ಪಕ್ಷದ ನಾಯಕರ ಸಂಬಂಧದಲ್ಲಿ ಅಗತ್ಯ ಶಿಷ್ಟಾಚಾರವನ್ನು ಪಾಲಿಸುವುದಲ್ಲದೆ ಮೇಲೆ ತಿಳಿಸಿರುವಂತೆ ವಿರೋಧ ಪಕ್ಷದ ನಾಯಕರಿಗೆ ಅಗತ್ಯ ಮಾಹಿತಿಯನ್ನು ಸೂಕ್ತವಾಗಿ ಒದಗಿಸಬಹುದಾಗಿದೆ ಎಂದು ನಿರ್ದೇಶನವಿರುತ್ತದೆ.

ಸರ್ಕಾರದ ಸುತ್ತೋಲೆಯನ್ನು ಈ ಪತ್ರದೊಂದಿಗೆ ಲಗ್ತಿಸಲಾಗಿದ್ದು, ಸದರಿ ಸುತ್ತೋಲೆಯಲ್ಲಿ ಸ್ಪಷ್ಟಪಡಿಸಲಾಗಿರುವ ಸೂಚನೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸುವುದು.

ಅಡಕ: ಮೇಲಿನಂತೆ.

(ರಾಜೇಂದರ್ ಕುಮಾರ ಕಟಾರಿಯಾ)
ವ್ಯವಸ್ಥಾಪಕ ನಿರ್ದೇಶಕರು

<u>ಪ್ರತಿ ಮಾಹಿತಿಗಾಗಿ:</u>

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

<u>ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ), ಕರಾರಸಾ ನಿಗಮ/ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
6. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿಗಳು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
9. ಪ್ರಧಾನ ಕಛೇರಿ ಪತ್ರ ಕಡತ.